# ಪ್ರಧಾನ ಮಂತ್ರಿ  ಹಾಗೂ ಮಂತ್ರಿಮಂಡಲದ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ನೆರೆರಾಷ್ಟ್ರಗಳ ನಾಯಕರ ಭೇಟಿ

ಜೂನ್ 08,2024

2024ರ ಸಾರ್ವತ್ರಿಕ ಚುನಾವಣೆಯ ಬಳಿಕ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಹಾಗೂ ಸಚಿವ ಸಂಪುಟ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ಜೂನ್ 09 2024 ರಂದು ನಿಗದಿಪಡಿಸಲಾಗಿದೆ. ಈ ಸಮಾರಂಭಕ್ಕೆ ಭಾರತದ ನೆರೆಹೊರೆ ಹಾಗೂ ಹಿಂದೂ ಮಹಾಸಾಗರ ವ್ಯಾಪ್ತಿಯ ನಾಯಕರನ್ನು ಗೌರವಾನ್ವಿತ ಅತಿಥಿಗಳನ್ನಾಗಿ ಆಹ್ವಾನಿಸಲಾಗಿದೆ.

2. ಶ್ರೀಲಂಕಾದ ರಾಷ್ಟ್ರಾಧ್ಯಕ್ಷ ಘನತೆವೆತ್ತ ರನಿಲ್ ವಿಕ್ರಮಸಿಂಘೆ; ಮಾಲ್ಡೀವ್ಸ್‌ನ ರಾಷ್ಟ್ರಾಧ್ಯಕ್ಷ ಘನತೆವೆತ್ತ ಡಾ.ಮೊಹಮದ್ ಮುಯಿಝು; ಸೆಶೆಲ್ಸ್‌ನ ಉಪಾಧ್ಯಕ್ಷ ಘನತೆವೆತ್ತ ಅಹ್ಮದ್ ಆಫೀಫ್; ಬಾಂಗ್ಲಾದೇಶದ ಪ್ರಧಾನಮಂತ್ರಿ ಘನತೆವೆತ್ತ ಶೇಖ್ ಹಸೀನಾ; ಮಾರಿಷಸ್ ಪ್ರಧಾನಿ ಘನತೆವೆತ್ತ ಶ್ರೀ ಪ್ರವಿಂದ್ ಕುಮಾರ್ ಜುಗ್ನೌತ್; ನೇಪಾಳದ ಪ್ರಧಾನಮಂತ್ರಿ ಘನತೆವೆತ್ತ ಪುಷ್ಪಕಮಲ್ ದಹಲ್ 'ಪ್ರಚಂಡ'; ಹಾಗೂ ಭೂತಾನ್ ಪ್ರಧಾನ ಮಂತ್ರಿ ಘನತೆವೆತ್ತ ತ್ಯೆರಿಂಗ್ ಟೋಬ್ಗೇ ಅವರಿಗೆ ಆಹ್ವಾನ ನೀಡಲಾಗಿದೆ.

3. ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸುವುದರ ಜೊತೆಗೆ ಈ ನಾಯಕರು ಅದೇ ದಿನ ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಆಯೋಜಿಸಿರುವ ಔತಣಕೂಟದಲ್ಲಿ ಭಾಗವಹಿಸಲಿದ್ದಾರೆ.

4. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಸತತ ಮೂರನೇ ಅವಧಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸುವ ನಾಯಕರ ಭೇಟಿಯು ಭಾರತದ 'ನೆರೆರಾಷ್ಟ್ರಗಳೇ ಮೊದಲು' ಎಂಬ ನೀತಿ ಹಾಗೂ 'ಸಾಗರ್' ಧ್ಯೇಯಕ್ಕೆ ನೀಡುವ ಆದ್ಯತೆಗೆ ಅನುಗುಣವಾಗಿದೆ.

**ನವದೆಹಲಿ**

**ಜೂನ್ 08,2024**